**Bangalore**
**Regional News**
**05.08.2024 / 6.40 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಪ್ರವಾಹ ಸಂತ್ರಸ್ತರಿಗೆ ಬೇರೆಡೆ ಶಾಶ್ವತ ಪರಿಹಾರ– ಮುಖ್ಯಮಂತ್ರಿ ಸಿದ್ದರಾಮಯ್ಯ
2. ಗುಡ್ಡ ಕುಸಿತ ಘಟನೆಗಳ ತಡೆಗೆ 300 ಕೋಟಿ ರೂಪಾಯಿ ವೆಚ್ಚದಲ್ಲಿ ಕಾಮಗಾರಿ– ಕಂದಾಯ ಸಚಿವ ಕೃಷ್ಣ ಬೈರೇಗೌಡ
3. ಮಾನವ–ಆನೆ ಸಂಘರ್ಷ ಕುರಿತಂತೆ ಬೆಂಗಳೂರಿನಲ್ಲಿ ಇದೇ 12 ರಂದು ಅಂತಾರಾಷ್ಟ್ರೀಯ ಸಮ್ಮೇಳನ
4. ಬಿಬಿಎಂಪಿ ವ್ಯಾಪ್ತಿಯಲ್ಲಿ ಸ್ವಚ್ಛತೆ ಕಾಪಾಡದ ಖಾಲಿ ನಿವೇಶನಗಳ ಮಾಲೀಕರಿಗೆ ನೋಟಿಸ್– ಬಿಬಿಎಂಪಿ ಮುಖ್ಯ ಆಯುಕ್ತ

****************

ಪ್ರವಾಹದಿಂದ ಮುಳುಗಡೆಯಾಗುವ ಗ್ರಾಮಗಳ ಸಂತ್ರಸ್ತರಿಗೆ ಬೇರೆಡೆ ಶಾಶ್ವತ ಪರಿಹಾರ ಕಲ್ಪಿಸಲು ಸರ್ಕಾರ ಯೋಜಿಸಿದ್ದು, ಸಂತ್ರಸ್ತರು ಸಹಕರಿಸಿದರೆ ಅವಕಾಶ ಕಲ್ಪಿಸಿಕೊಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ 42 ದಿನಗಳಿಂದ ನಿರಂತರ ಮಳೆ ಸುರಿಯುತ್ತಿದೆ. ಈಗಾಗಲೇ ಮೈಸೂರು, ಕೊಡಗು, ಹಾಸನ ಜಿಲ್ಲೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆ ಎಂದರು.

ಪೂರ್ಣ ಪ್ರಮಾಣದಲ್ಲಿ ಮನೆ ಕಳೆದುಕೊಂಡವರಿಗೆ ರಾಜ್ಯ ಸರ್ಕಾರದಿಂದ ಮನೆ ನಿರ್ಮಿಸಿಕೊಡುವುದರ ಜೊತೆಗೆ 1 ಲಕ್ಷ 20 ಸಾವಿರ ರೂಪಾಯಿಗಳ ಪರಿಹಾರ ನೀಡಲಾಗುವುದು ಎಂದು ತಿಳಿಸಿದರು.

ಹವಾಮಾನ ಇಲಾಖೆ ಮುಂದಿನ ವಾರ ಕೂಡ ಭಾರೀ ಮಳೆಯ ಮುನ್ಸೂಚನೆ ನೀಡಿರುವುದರಿಂದ ಅಗತ್ಯ ಕ್ರಮಕ್ಕಾಗಿ ನೀರಾವರಿ, ವಿದ್ಯುತ್, ಅರಣ್ಯ ಇಲಾಖೆ ಸೇರಿದಂತೆ ಎಲ್ಲ ಇಲಾಖೆಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಟಿ.ಜೆ.ಅಬ್ರಾಹಮ್ ಸಲ್ಲಿಸಿರುವ ಅರ್ಜಿ ವಜಾಗೊಳಿಸಲು ಮತ್ತು ನೋಟಿಸ್ ಹಿಂತೆಗೆದುಕೊಳ್ಳಲು ರಾಜ್ಯಪಾಲರಿಗೆ ಮನವಿ ಮಾಡಲಾಗಿದೆ. ಈ ಪ್ರಕರಣ ಎದುರಿಸಲು ಕಾನೂನಾತ್ಮಕ ಮತ್ತು ರಾಜಕೀಯವಾಗಿ ಸಿದ್ಧರಿದ್ದೇವೆ ಎಂದು ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ನಂತರ ಅವರು ಗೋಕಾಕ, ಚಿಕ್ಕೋಡಿ ಮತ್ತು ಕಾಗವಾಡ ತಾಲೂಕಿನ ವಿವಿಧ ಸ್ಥಳಗಳಲ್ಲಿ ನೆರಹಾವಳಿ ಪರಿಸ್ಥಿತಿಯನ್ನು ವೀಕ್ಷಿಸಿದರು.

****************

ರಾಜ್ಯದ ಮಲೆನಾಡು ಭಾಗ ಸೇರಿದಂತೆ ಹಲವೆಡೆ ಗುಡ್ಡ ಕುಸಿತ ಉಂಟಾಗಿದ್ದು, ಮುಂದಿನ ದಿನಗಳಲ್ಲಿ ಇದನ್ನು ತಡೆಯಲು ರಾಜ್ಯ ಸರ್ಕಾರದಿಂದ ಸುಮಾರು 300 ಕೋಟಿ ರೂಪಾಯಿ ವೆಚ್ಚದಲ್ಲಿ ಕಾಮಗಾರಿ ಆರಂಭಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ ರಸ್ತೆಯ ಕವಿಕಲ್ ಗಂಡಿ ಬಳಿ ಮಳೆಯಿಂದ ಭೂಕುಸಿತ ಉಂಟಾಗಿರುವ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ 20 ದಿನಗಳಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿ ಅನಾಹುತಗಳಾಗಿವೆ ಎಂದರು.

ಕಳೆದ ವರ್ಷವೇ ಇಡೀ ರಾಜ್ಯದಲ್ಲಿ ಭೂಕುಸಿತ ಉಂಟಾಗುವ ಪ್ರದೇಶಗಳ ಸರ್ವೆ ನಡೆಸಲಾಗಿದ್ದು, ಇದರ ವರದಿಯನ್ನು ಮಲೆನಾಡು ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಗಿದೆ. ಭೂಕುಸಿತ ತಡೆಗಟ್ಟಲು 300 ಕೋಟಿ ರೂಪಾಯಿ ಹಣ ಬಿಡುಗಡೆಗೆ ಮುಖ್ಯಮಂತ್ರಿಗಳು ಸಮ್ಮತಿಸಿದ್ದಾರೆ ಎಂದು ತಿಳಿಸಿದರು.

ಈ ವರ್ಷ ಮೊದಲ ಹಂತವಾಗಿ 100 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿ ಕಾಮಗಾರಿ ಆರಂಭಿಸಲಾಗುವುದು. ಆನೇಕ ಕಡೆ ರಸ್ತೆಗಳು ಕುಸಿದಿದ್ದು, ಹೆಚ್ಚಿನ ಹಾನಿಯಾಗಿದೆ. ಅವುಗಳ ಮರು ನಿರ್ಮಾಣಕ್ಕೆ ಇನ್ನು 15 ದಿನಗಳಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಕೃಷ್ಣ ಬೈರೇಗೌಡ ಮಾಹಿತಿ ನೀಡಿದರು.

****************

ಆಗಸ್ಟ್ 12ರ ವಿಶ್ವ ಆನೆಯ ದಿನದಂದು ಬೆಂಗಳೂರಿನ ಕೃಷಿ ವಿಶ್ವವಿದ್ಯಾಲಯದ ಗಾಂಧಿ ಕೃಷಿ ವಿಜ್ಞಾನ ಕೇಂದ್ರ–ಜಿಕೆವಿಕೆ ಆವರಣದಲ್ಲಿ ಅರಣ್ಯ ಇಲಾಖೆ ವತಿಯಿಂದ ಮಾನವ–ಆನೆ ಸಂಘರ್ಷ ಕುರಿತಂತೆ ಅಂತಾರಾಷ್ಟ್ರೀಯ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಒಂದು ದಿನದ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಅಮೆರಿಕಾ, ಜರ್ಮನಿ, ಜಪಾನ್, ಬ್ರಿಟನ್ ಸೇರಿದಂತೆ 11 ರಾಷ್ಟ್ರಗಳ ಸುಮಾರು 17ಕ್ಕೂ ಹೆಚ್ಚು ಪ್ರತಿನಿಧಿಗಳು ಹಾಗೂ ದೇಶದ ವಿವಿಧ ರಾಜ್ಯಗಳ 660 ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಆನೆಗಳು ಮತ್ತು ಇತರೆ ವನ್ಯಜೀವಿಗಳು ನಾಡಿಗೆ ಬರದಂತೆ ಬೇರೆ ಬೇರೆ ರಾಜ್ಯಗಳಲ್ಲಿ, ವಿದೇಶಗಳಲ್ಲಿ ಯಾವ ತಂತ್ರಗಾರಿಕೆ, ಪದ್ಧತಿ ಅನುಸರಿಸಲಾಗುತ್ತಿದೆ, ಯಾವ ಕಾರ್ಯತಂತ್ರ ಅಳವಡಿಸಿಕೊಳ್ಳಲಾಗಿದೆ ಎಂಬುದರ ಬಗ್ಗೆ ಈ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಚಿಂತನ–ಮಂಥನ ನಡೆಯಲಿದೆ. ಅತ್ಯುತ್ತಮ ರೂಢಿಗಳನ್ನು ನಮ್ಮ ರಾಜ್ಯದಲ್ಲಿಯೂ ಅಳವಡಿಸಿಕೊಳ್ಳಲು ಈ ಸಮ್ಮೇಳನ ಸಹಕಾರಿಯಾಗಿದೆ ಎಂದರು.

ರಾಜ್ಯದಲ್ಲಿ 6 ಸಾವಿರದ 395 ಆನೆಗಳಿದ್ದು, ದೇಶದಲ್ಲಿಯೇ ಗಜ ಸಂಖ್ಯೆಯಲ್ಲಿ ಪ್ರಥಮ ಸ್ಥಾನದಲ್ಲಿದೆ. ಅದೇ ರೀತಿ 563 ಹುಲಿ ಹೊಂದಿರುವ ರಾಜ್ಯವು, ವ್ಯಾಘ್ರಗಳ ಸಂಖ್ಯೆಯಲ್ಲಿ ದೇಶದಲ್ಲಿ 2ನೇ ಸ್ಥಾನದಲ್ಲಿದೆ ಎಂದು ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

****************

ಬಿಬಿಎಂಪಿ ವ್ಯಾಪ್ತಿಯಲ್ಲಿ ಸ್ವಚ್ಛತೆ ಕಾಪಾಡದ ಖಾಲಿ ನಿವೇಶನಗಳನ್ನು ಗುರುತಿಸಿ ಮಾಲೀಕರಿಗೆ ನೋಟಿಸ್ ನೀಡಿ ದಂಡ ವಿಧಿಸಬೇಕೆಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಪಾಲಿಕೆ ಕೇಂದ್ರ ಕಚೇರಿಯಲ್ಲಿ ಇಂದು ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪಾಲಿಕೆ ವ್ಯಾಪ್ತಿಯ ಆಯಾ ವಲಯ ವ್ಯಾಪ್ತಿಯಲ್ಲಿ ಖಾಲಿ ನಿವೇಶನಗಳನ್ನು ಪಟ್ಟಿ ಮಾಡಬೇಕು. ನಂತರ ಸ್ವಚ್ಛತೆ ಕಾಪಾಡದ ಖಾಲಿ ನಿವೇಶನಗಳ ಮಾಲೀಕರಿಗೆ ನೋಟಿಸ್ ಜಾರಿಗೊಳಿಸಬೇಕು. ಸ್ವಚ್ಛಗೊಳಿಸಿ, ದಂಡ ವಿಧಿಸುವುದರ ಜೊತೆಗೆ ಮತ್ತೆ ಈ ರೀತಿ ಮರುಕಳಿಸದಂತೆ ಎಚ್ಚರಿಕೆ ನೀಡಬೇಕೆಂದು ನಿರ್ದೇಶಿಸಿದರು.

ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತ ಜಾಹೀರಾತುಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ಆಯಾ ವಲಯ ವ್ಯಾಪ್ತಿಯಲ್ಲಿರುವ ಮುದ್ರಣಾಲಯಗಳಿಗೆ ನೋಟಿಸ್ ನೀಡಬೇಕು. ಯಾವುದೇ ಅನಧಿಕೃತ ಜಾಹೀರಾತು ಹಾಗೂ ಪರಿಸರ ಸಂರಕ್ಷಣಾ ಕಾಯ್ದೆ ಉಲ್ಲಂಘನೆ ಮಾಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ಉಲ್ಲಂಘನೆ ಮಾಡುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಪಾಲಿಕೆ ವ್ಯಾಪ್ತಿಯಲ್ಲಿ ಎಲ್ಲಿಯೂ ಅನಧಿಕೃತ ಜಾಹೀರಾತುಗಳು ಅಳವಡಿಸದಂತೆ ಕಟ್ಟೆಚ್ಚರ ವಹಿಸಬೇಕು ಎಂದು ಅಧಿಕಾರಿಗಳಿಗೆ ಬಿಬಿಎಂಪಿ ಮುಖ್ಯ ಆಯುಕ್ತರು ಸೂಚಿಸಿದರು.

****************

ಯಾದಗಿರಿ ನಗರ ಠಾಣೆಯ ಪಿಎಸ್ಐ ಪರಶುರಾಮ್ ಅನುಮಾನಾಸ್ಪದ ಸಾವಿನ ಪ್ರಕರಣ ತನಿಖೆಗೆ ಅಪರಾಧ ತನಿಖಾ ದಳ-ಸಿಐಡಿ ತಂಡವು ಯಾದಗಿರಿಗೆ ಭೇಟಿ ನೀಡಿದ್ದು, ಪ್ರಾಥಮಿಕ ಮಾಹಿತಿ ಸಂಗ್ರಹಿಸಿದೆ ಎಂದು ಮೂಲಗಳು ತಿಳಿಸಿವೆ.

ಸಿಐಡಿ ಡಿವೈಎಸ್‌ಪಿ ಪುನೀತ್ ಅವರ ತಂಡವು, ಯಾದಗಿರಿ ನಗರದ ಡಿವೈಎಸ್‌ಪಿ ಕಚೇರಿಯಲ್ಲಿ ತನಿಖಾಧಿಕಾರಿ ಡಿವೈಎಸ್‌ಪಿ ಜಾವೀದ್ ಇನಾಂದಾರ್ ಸೇರಿ ವಿವಿಧ ಠಾಣೆ ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ಪಡೆಯಿತು.

ಪರಶುರಾಮ್ ಅವರ ಸಾವಿಗೆ ಸಂಬಂಧಿಸಿದಂತೆ ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಅವರ ಪುತ್ರ ಪಂಪನಗೌಡ ವಿರುದ್ಧ ಯಾದಗಿರಿ ನಗರ ಠಾಣೆಯಲ್ಲಿ ದೂರು ದಾಖಲಾಗಿದೆ.

****************

ಈ ವರ್ಷ ಸರ್ಕಾರವು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮಕ್ಕೆ 95 ಕೋಟಿ ರೂಪಾಯಿ ಅನುದಾನವನ್ನು ಮಾತ್ರ ಬಿಡುಗಡೆ ಮಾಡಿದ್ದು, ಮಹಿಳಾ ಸಬಲೀಕರಣದ ದೃಷ್ಟಿಯಿಂದ ಹೆಚ್ಚು ಅನುದಾನ ಒದಗಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಮನವಿ ಮಾಡಲಾಗಿದೆ ಎಂದು ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ತಿಳಿಸಿದ್ದಾರೆ.

ಅವರು ಇಂದು ಚಿಕ್ಕಬಳ್ಳಾಪುರ ಜಿಲ್ಲೆಗೆ ಪ್ರವಾಸ ಕೈಗೊಂಡು, ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಅಸಹಾಯಕರು, ಶೋಚನೀಯ ಸ್ಥಿತಿಯಲ್ಲಿರುವ ಮಹಿಳೆಯರು, ಮಾಜಿ ದೇವದಾಸಿಯರು, ಲಿಂಗತ್ವ ಅಲ್ಪಸಂಖ್ಯಾತರಿಗೆ ಸಾಲ ಸೌಲಭ್ಯ ಸೇರಿದಂತೆ ಹಲವು ಯೋಜನೆಗಳ ಮೂಲಕ ಸಹಾಯ ಮಾಡಿ, ಅವರನ್ನು ಆರ್ಥಿಕವಾಗಿ ಸಶಕ್ತಗೊಳಿಸುವ ಜೊತೆಗೆ ಮುಖ್ಯವಾಹಿನಿಗೆ ತರುವ ಕೆಲಸವನ್ನು ಮಹಿಳಾ ಅಭಿವೃದ್ಧಿ ನಿಗಮ ಮಾಡುತ್ತಿದೆ ಎಂದರು.

ಆದರೆ, ವಿವಿಧ ಯೋಜನೆಗಳ ಮೂಲಕ ಫಲಾನುಭವಿಗಳನ್ನು ತಲುಪಲು ಮತ್ತು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲು ನಿಗಮಕ್ಕೆ ಅನುದಾನದ ಕೊರತೆ ಇದೆ ಎಂದು ತಿಳಿಸಿದರು.

****************

ರಾಜ್ಯ ಸರಕಾರದ ಜನಪರ ಯೋಜನೆಗಳನ್ನು ಅಧಿಕಾರಿಗಳು ಕಾಳಜಿಪೂರ್ವಕವಾಗಿ ಅನುಷ್ಠಾನಗೊಳಿಸಬೇಕು. ಅನ್ನಭಾಗ್ಯ ಯೋಜನೆಯಡಿ ನಿಯಮ ಪಾಲಿಸದ ನ್ಯಾಯಬೆಲೆ ಅಂಗಡಿಗಳ ಪರವಾನಗಿಯನ್ನು ರದ್ದುಪಡಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಎಸ್.ಆರ್.ಪಾಟೀಲ ಹೇಳಿದ್ದಾರೆ.

ಧಾರವಾಡ ಜಿಲ್ಲಾ ಪಂಚಾಯತಿಯ ಸಭಾಭವನದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮತ್ತು ಸಾಂಸ್ಥಿಕ ಕಾರ್ಯ ವಿಧಾನಗಳು ಹಾಗೂ ಪರಿಣಾಮಕಾರಿಯಾಗಿ ಜಾರಿಗೊಳಿಸುವ ಬಗ್ಗೆ ಕೈಗೊಂಡ ಕ್ರಮಗಳ ಬಗ್ಗೆ ಪ್ರಗತಿ ಪರಿಶೀಲನೆ ನಡೆಸಿ, ಅವರು ಮಾತನಾಡಿದರು.

ಗ್ಯಾರಂಟಿ ಅನುಷ್ಠಾನದ ತಾಲೂಕು ಸಮಿತಿಗಳು ನಿರಂತರ ಸಭೆಗಳ ಮೂಲಕ ತಾಲೂಕು ಮಟ್ಟದಲ್ಲಿ ಗ್ಯಾರಂಟಿಗಳ ಪ್ರಗತಿ ಪರಿಶೀಲನೆ ಮಾಡಬೇಕು. ಸಮಸ್ಯೆಗಳಿದ್ದಲ್ಲಿ, ಅಧಿಕಾರಿಗಳೊಂದಿಗೆ ಚರ್ಚಿಸಿ ಬಗೆಹರಿಸಬೇಕು. ಅರ್ಹರಿಗೆ ಯೋಜನೆಯ ಲಾಭ ತಲುಪುವಂತೆ ಮಾಡಬೇಕು ಎಂದು ಸೂಚಿಸಿದರು.

****************

**ಇನ್ನು ಹವಾವರ್ತಮಾನ...**

ರಾಜ್ಯದ ಕರಾವಳಿಯ ಹಲವು ಭಾಗಗಳಲ್ಲಿ ಹಾಗೂ ಒಳನಾಡಿನ ಕೆಲವುಕಡೆ ಇಂದು ಮಳೆಯಾಗಿದೆ. ಉತ್ತರಕನ್ನಡ ಜಿಲ್ಲೆಯ ಮಂಕಿಯಲ್ಲಿ ಅತಿಹೆಚ್ಚು 13 ಸೆಂಟಿಮೀಟರ್ ಮಳೆಯಾಗಿದೆ. ಇದೇ ವೇಳೆ ಕುಂದಾಪುರ 8, ಹೊನ್ನಾವರ, ಗೇರುಸೊಪ್ಪ, ಶಿರಾಲಿ ತಲಾ 7 ಸೆಂಟಿಮೀಟರ್ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಉತ್ತರಕನ್ನಡ ಜಿಲ್ಲೆಯ ಕದ್ರಾ 6, ಉಡುಪಿ, ಕ್ಯಾಸಲ್‌ರಾಕ್, ಆಗುಂಬೆ ತಲಾ 5, ಸಿದ್ದಾಪುರ, ಕುಮಟಾ, ಕೋಟಾ, ಗೋಕರ್ಣ ಮತ್ತು ಲಿಂಗನಮಕ್ಕಿಯಲ್ಲಿ ತಲಾ 4 ಸೆಂಟಿ ಮೀಟರ್ ಮಳೆಯಾಗಿದೆ.

ಮುಂದಿನ 24 ಗಂಟೆಗಳಲ್ಲಿ ಕರಾವಳಿ ಬಹುತೇಕ ಕಡೆಗಳಲ್ಲಿ ಹಗರುದಿಂದ ಸಾಧಾರಣ ಮಳೆಯಾಗುವ ಸಂಭವ. ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಮುಂದಿನ 24 ಗಂಟೆಗಳಲ್ಲಿ ಬೆಂಗಳೂರಿನಲ್ಲಿ ಸಾಮಾನ್ಯವಾಗಿ ಮೋಡ ಕವಿದ ವಾತಾವರಣವಿರಲಿದ್ದು, ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಗರಿಷ್ಠ 28 ಹಾಗೂ ಕನಿಷ್ಠ 21 ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

******** ಮುಕ್ತಾಯ ********